**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 404/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | ಕೋಟೇಗೌಡ ಹೆಚ್. ಎನ್. | ಪ್ರಾಸಾಃ 6 |
| ತಂದೆಯ/ಗಂಡನ ಹೆಸರು | | ನರಸಿಂಹೇಗೌಡ | ಚಾಸಾಃ 8 |
| ವಯಸ್ಸು | | 59 ವರ್ಷ | |
| ಕೆಲಸ | | ಪಿ.ಎಸ್.ಐ, ಡಿ.ಸಿ.ಆರ್.ಬಿ. ಮೈಸೂರು | ಸಾ ಪ್ರ ಬೋ |
| ವಾಸ | | ನಂಜನಗೂಡು | ದಿಃ 19.02.2024 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು ಬದನವಾಳು ಪೋಲಿಸ್ ಠಾಣೆಯಲ್ಲಿ 2014 ರಿಂದ 2016 ವರೆಗೂ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 20.04.2014 ರಂದು ಮದ್ಯಾಹ್ನ 3.15 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಚಾಸಾ-7 ರವರು ತಂದು ಹಾಜರುಪಡಿಸಿದ ಚಾಸಾ-1 ರವರ ಹೇಳಿಕೆಯನ್ನು ಸ್ವೀಕರಿಸಿ ಠಾಣಾ ಮೊ.ಸಂಖ್ಯೆ 96/2014 ರಲ್ಲಿ ಭಾ.ದಂ.ಸಂ.ಕಲಂ 323, 324, 504, 506 ಸಹವಾಚಕ ಕಲಂ 34 ರಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರ.ವ.ವ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿನಾಂಕ 21.04.2014 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ-2 ರವರು ತೋರಿಸಿದ ಕೃತ್ಯ ನಡೆದ ಸ್ಥಳದಲ್ಲಿ ಚಾಸಾ-3 ಮತ್ತು 4 ರವರ ಸಮಕ್ಷಮ ಬೆಳಗ್ಗೆ 10.15 ರಿಂದ 11.00 ರವರೆಗೆ ಸ್ಥಳ ಮಹಜರ್ ಜರುಗಿಸಿ ಆರೋಪಿತರು ಕೃತ್ಯಕ್ಕೆ ಬಳಸಿದ್ದ ಒಂದು ಕಬ್ಬಿಣದ ಮಚ್ಚು, ಒಂದು ಎರಡು ಅಡಿ ಉದ್ದದ ಬಿದಿರು ದೊಣ್ಣೆ ಮತ್ತು ಕೃತ್ಯ ನಡೆದ ದಿನ ಚಾಸಾ 1 ರವರು ಧರಿಸಿದ್ದ ಎಂದು ತುಂಬು ತೋಳಿನ ರಕ್ತದ ಕಲೆಯಾಗಿದ್ದ ಬಿಳಿಯ ಅಂಗಿಯನ್ನು ಚಾಸಾ 2 ರವರು ಹಾಜರು ಪಡಿಸಿದ ಮೇರೆಗೆ ಅಮಾನತ್ತು ಪಡಿಸಿಕೊಂಡು ಠಾಣಾ ಮಾಲುಪಟ್ಟಿ ಸಂಖ್ಯೆ 69/14 ರಲ್ಲಿ ಅಳವಡಿಸಿಕೊಂಡಿರುತ್ತೇನೆ.

ಅದೇ ದಿನ ಸಾಕ್ಷಿದಾರರಾದ ಚಾಸಾ-2 ಮತ್ತು ಚಾಸಾ-5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-9 ರವರಿಗೆ ನೀಡಿರುತ್ತೇನೆ.

ಈಗ ನನಗೆ ತೋರಿಸಿದ ದಾಖಲೆಯು ನಾನು ಸ್ವೀಕರಿಸಿದ ದೂರಾಗಿದ್ದು ಅದರಲ್ಲಿ ನನ್ನ ರುಜು ಇರುತ್ತದೆ. ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಾಲಗಿದ್ದು, ಸಾಕ್ಷಿಯ ರುಜುವನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಪ್ರಥಮ ವರ್ತಮಾನ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-6 ಎಂದು ಗುರುತಿಸಲಾಯಿತು. ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಈಗ ಸಾಕ್ಷಿಗೆ ಸ್ಥಳ ಮಹಜರ್ ಅನ್ನು ತೋರಿಸಿದ್ದು ಅದು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ಗುರುತಿಸಿದ್ದು ಅದನ್ನು ಈಗ ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರ ಅಡಿಯಲ್ಲಿ ಅಮಾನತ್ತು ಪಡಿಸಿಕೊಂಡ ಮಚ್ಚು, ದೊಣ್ಣೆ ಮತ್ತು ರಕ್ತದ ಕಲೆಯಾಗಿರುವ ಬಿಳಿ ಅಂಗಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮಚ್ಚು, ದೊಣ್ಣೆ ಮತ್ತು ರಕ್ತದ ಕಲೆಯಾಗಿರುವ ಬಿಳಿ ಅಂಗಿ ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ಮು.ಮಾ.1 ರಿಂದ 3 ಎಂದು ಗುರುತಿಸಲಾಗಿದೆ.

**<u>ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ</u>**

ಆರೋಪಿತರ ವಿರುದ್ದ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿಲ್ಲ, ಸ್ಥಳದಲ್ಲಿ ಯಾವುದೇ ಪಂಚನಾಮೆ ತಯಾರಿಸಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ನಿಪಿ-2 ಪಂಚನಾಮೆಯನ್ನು ಮುಖ್ಯಪೇದೆ ಶಂಕರಪ್ಪರವರು ಬರೆದಿರುತ್ತಾರೆ. ನಿಪಿ-2 ರಲ್ಲಿ ಬಿಕ್ಲಾಮದಾರರ ರುಜು ಇಲ್ಲ ಮತ್ತು ಈ ಪ್ರಕರಣದಲ್ಲಿ ಅವರು ಸಾಕ್ಷಿದಾರರಲ್ಲ. ಪಂಚನಾಮೆಯನ್ನು ಠಾಣೆಯಲ್ಲಿ ಸೃಷ್ಟಿಸಿಕೊಳ್ಳಲಾಗಿದೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಪ್ರಕರಣಕ್ಕೆ ಪೂರಕವಾಗುವಂತೆ ಸಾಕ್ಷಿದಾರರ ಹೇಳಿಕೆಗಳನ್ನು ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**